ಶ್ರೀ ಎನ್. ಹೆಚ್. ಗೌಡ.—ಮಾನ್ಯ ಅಧ್ಯಕ್ಷರೆ, ಮಾನ್ಯ ಮಂತ್ರಿಗಳು ಕೊಟ್ಟ ಉತ್ತರದಿಂದ ನನಗೆ ಸಾಮಾನ್ಯವಾಗಿ ತೃಪ್ತಿಯಾಗಿದೆ. ಆದರೂ ಕರ್ನಾಟಕ ರಾಜ್ಯದಲ್ಲಿ ೭೮ ಜಿಲ್ಲಾವಂಟ್ಟದ ಶಿಕ್ಷಣಾಧಿಕಾರಿಗಳ ಹುದ್ದೆಗಳು ಖಾಲಿ ಇವೆ ಎಂದು ಹೇಳಿದ್ದಾರೆ. ಈ ಹುದ್ದೆಗಳು ಎಷ್ಟು ಕಾಲದಿಂದ ಖಾಲಿ ಇವೆ ಎಂದು ಮಾನ್ಯ ಮಂತ್ರಿಗಳನ್ನು ತವಥ್ಥ ಮುಖಾಂತರ ಕೇಳುತ್ತಾ ಇದ್ದೇನೆ.

ಶ್ರೀ ಬಿ. ಸೋಮಶೇಖರ್. – ಎಷ್ಟು ಕಾಲದಿಂದ ಖಾಲಿ ಇವೆ ಎಂದು ನಿಗದಿತವಾಗಿ ಕಾಲವನ್ನು ಹೇಳುವುದಕ್ಕೆ ಸಾಧ್ಯವಿಲ್ಲ, ಬಹಳ ದಿನಗಳಿಂದ ಖಾಲಿ ಇವೆ. ಶೀಘ್ರದಲ್ಲೇ ಅದನ್ನು ತುಂಬತಕ್ಕ ವ್ಯವಸ್ಥೆ ಮಾಡುತ್ತಾ ಇದ್ದೇವೆ. ಆದ್ದರಿಂದ ಅವರು ಏನೂ ಆನಂಮಾನ ಪಡಬೇಕಾದ್ದಿಲ್ಲ.

ಶ್ರೀ ಎನ್. ಎಚ್. ಗೌಡ.—ನಿಜವಾಗಿ ಶಿಕ್ಷಣ ಎನ್ನುವುದು ಬಹಳ ದೊಡ್ಡದು, ಅದು ಮಾನವನ ಅನುಭವದ ಅಮರಗಂಗೆ. ಶಿಕ್ಷಣವೇ ಜೀವನ, ಜೀವನವೇ ಶಿಕ್ಷಣ ಎಂದು ತಜ್ಞರು ಹೇಳಿದ್ದಾರೆ. ಆದುದರಿಂದ ಈ ಶಿಕ್ಷಣ ಕ್ಷೇತ್ರದಲ್ಲಿ ಯಾವುದೇ ಒಂದು ಭಾಗದಲ್ಲಿ ಹೊಡೆತ ಬಿದ್ದರೂ ಕೂಡ ಅದು ಮಾನವನ ಬದುಕಿಗೆ ಮತ್ತು ಸಂಸ್ಕೃತಿಗೆ ದೊಡ್ಡ ಹೊಡೆತ, ಆದುದರಿಂದ ಈ ರೀತಿ ಅಧಿಕಾರಿಗಳ ಹುದ್ದೆ ಖಾಲಿ ಇದ್ದರೆ ಆಗಂವಂಥ ಅನಾಹುತ ಹೆಚ್ಚು ಎಂದು ನನಗನ್ನಿಸುತ್ತದೆ. ಮಾನ್ಯ ಸಚಿವರು ಆದಷ್ಟು ಬೇಗ ಈ ಹುದ್ದೆಗಳನ್ನು ತುಂಬುತ್ತೇವೆ ಎಂದು ಹೇಳಿದ್ದಾರೆ. ಒಂದು ವಾರದಲ್ಲಿ ಈ ಕೆಲಸವನ್ನು ತಾವು ಪೂರ್ತಿಗೊಳಿಸುತ್ತೀರಾ ?

ಶ್ರೀ ಬಿ. ಸೋಮಶೇಖರ್.—೧೫ ದಿವಸದೊಳಗೆ ಈ ಕೆಲಸವನ್ನು ಮುಗಿಸುತ್ತೇನೆ.

ಶ್ರೀ ಎನ್. ಹೆಚ್. ಗೌಡ.—ಹಾಗಿದ್ದರೆ ಸಚಿವರಿಗೆ ಕೃತಜ್ಞತೆಗಳು.

ಪ್ರೌಢ ಹಾಗೂ ಪ್ರಾಥಮಿಕ ಶಾಲೆಗಳಲ್ಲಿ ಬೋಧಕರ ಹಾಗೂ ಬೋಧಕೇತರರ ಖಾಲಿ ಹುದ್ದೆಗಳು

೧೯೩೪. ಶ್ರೀ ವಸಂತ ಬಂಗೇರ ಕೆ. (ಬೆಳ್ತಂಗಡಿ).—ಮಾನ್ಯ ಪ್ರಾಥಮಿಕ ಹಾಗೂ ಸಾಧ್ಯಮಿಕ ಶಿಕ್ಷಣ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

(ಅ) ಕರ್ನಾಟಕ ರಾಜ್ಯದ ಪ್ರೌಢ ಹಾಗೂ ಪ್ರಾಥಮಿಕ (ಸರ್ಕಾರಿ) ಶಾಲೆಗಳಲ್ಲಿ ಶಿಕ್ಷಕರ ಹಾಗೂ ಇತರೆ ಖಾಲಿ ಇರುವ ಹುದ್ದೆಗಳ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ/ಹಾಗಿದ್ದಲ್ಲಿ, ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

(ಆ) ಹಾಗಿದ್ದಲ್ಲಿ ಭರ್ತಿ ಯಾವಾಗ ಮಾಡಲಾಗುವುದು ?

ಶ್ರೀ ಬಿ. ಸೋಮಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಮಂತ್ರಿಗಳು).—

(ಅ) ಹೌದು, ಖಾಲಿ ಶಿಕ್ಷಕರ ಹುದ್ದೆಗಳಿಗೆ ನೇಮಕಾತಿ ಬಗ್ಗೆ ಸಮಿತಿಗಳನ್ನು ರಚಿಸಲಾಗಿದೆ. ಹಲವು ನೇಮಕಾತಿ ಸಮಿತಿಗಳು ಶಿಕ್ಷಕರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಿ ಪ್ರಕಟಣೆ ನೀಡಿವೆ.

(ಆ) ಖಾಲಿ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದಿಂದ ದಿನಾಂಕ ೨೦-೫-೧೯೮೮ ರಲ್ಲಿ ಆದೇಶ ಹೊರಡಿಸಲಾಗಿದೆ.

೧೧-೩೦ ಎ.ಎಂ.

ಶ್ರೀ ಕೆ. ವಸಂತ ಬಂಗೇರ.—ರಾಜ್ಯದ ಕೆಲವು ಪ್ರಾಥಮಿಕ ಶಾಲೆಗಳಲ್ಲಿ ೧ನೇ ತರಗತಿಯಿಂದ ೫ನೆಯ ತರಗತಿಯವರೆಗೆ ಒಬ್ಬರೇ ಉಪಾಧ್ಯಾಯರು ಇದ್ದಾರೆ. ಏಕ ಉಪಾಧ್ಯಾಯರ ಶಾಲೆ, ಮುಖ್ಯ ಉಪಾಧ್ಯಾಯರು ಎಂದು ಬೋರ್ಡ್ ಹಾಕಿಕೊಂಡು ಕೆಲಸ ಮಾಡುತ್ತಿದ್ದಾರೆ. ಇವರು ಸುಮಾರು ೧೫೦ ವಿದ್ಯಾರ್ಥಿಗಳಿಗೂ ಮಿಕ್ಕಿ, ವಿದ್ಯಾರ್ಥಿಗಳಿಗೆ ವಿದ್ಯಾರ್ಜನೆ ನೀಡಬೇಕಾಗಿದೆ. ಈ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ? ರಾಜ್ಯದಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಎಷ್ಟು

ಉಪಾಧ್ಯಾಯರುಗಳ ಹುದ್ದೆಗಳು ಖಾಲಿ ಇವೆ. ಶಿಕ್ಷಕರ ಹಾಗೂ ಇತರೆ ಹುದ್ದೆಗಳಲ್ಲಿ ನಿವೃತ್ತಿ ಹೊಂದಿರುವವರು ಎಷ್ಟು ? ಇವುಗಳನ್ನು ಯಾವಾಗ ಹೇಗೆ ತುಂಬುತ್ತೀರಿ ?

ಶ್ರೀ ಬಿ. ಸೋಮಶೇಖರ್.—ಮಾನ್ಯ ಅಧ್ಯಕ್ಷರೆ, ಈಗಾಗಲೇ ಸಮಿತಿಯೆಂದನ್ನು ರಚನೆ ಮಾಡಲಾಗಿದೆ. ಸಮಿತಿಗಳು ಕೆಲಸವನ್ನು ಪ್ರಾರಂಭ ಮಾಡಬೇಕೆಂದು ಸರ್ಕಾರ ಆದೇಶ ನೀಡಿದೆ. ಆದಷ್ಟು ಬೇಗ ಶಿಕ್ಷಕರ ನೇಮಕವನ್ನು ಮಾಡಲಾಗುವುದು.

ಶ್ರೀ ಕೆ. ವಸಂತ ಬಂಗೇರ.—ಮಾನ್ಯ ಅಧ್ಯಕ್ಷರೆ, ಸಮಿತಿಗಳನ್ನು ಯಾವ ಯಾವ ಜಿಲ್ಲೆಗಳಲ್ಲಿ ರಚನೆ ಮಾಡಲಾಗಿದೆ ? ಯಾವ ಯಾವ ಜಿಲ್ಲೆಗಳಲ್ಲಿ ಅರ್ಜಿಗಳನ್ನು ಆಹ್ವಾನಿಸಿದ್ದೀರಿ? ೨೦-೫-೧೯೯೮ರಲ್ಲಿ ಆದೇಶವನ್ನು ಹೊರಡಿಸಿದ್ದೇವೆಂದು ಹೇಳಿದ್ದೀರಿ ? ಹಾಗಿದ್ದರೆ ಯಾವ ರೀತಿಯ ಆದೇಶವನ್ನು ಹೊರಡಿಸಿದ್ದೀರಿ ?

ಶ್ರೀ ಬಿ. ಸೋಮಶೇಖರ್.—ಸಮಿತಿಗಳನ್ನು ಎಲ್ಲಿ ಜಿಲ್ಲೆಗಳಲ್ಲಿ ರಚಿಸಲಾಗಿದೆ. ೨೦-೫-೧೯೯೮ರಲ್ಲಿ ಸಮಿತಿಗಳು ಕೆಲಸ ಮಾಡುವಂತೆ ಆದೇಶ ಹೊರಡಿಸಲಾಗಿದೆ. ಖಾಲಿ ಇರುವಕ್ಕ ಹುದ್ದೆಗಳನ್ನು ತುಂಬುವುದಕ್ಕೆ ಮಾನ್ಯ ಮುಖ್ಯಮಂತ್ರಿಗಳು ಅನುಮತಿ ಕೊಟ್ಟಿದ್ದಾರೆ. ಒಂದು ತಿಂಗಳೊಳಗೆ ಸಂದರ್ಶನಕ್ಕೆ ಕರೆದು ಉಪಾಧ್ಯಾಯರ ನೇಮಕವನ್ನು ಮಾಡಲಾಗುವುದು.

ಶ್ರೀ ಕೆ. ವಸಂತ ಬಂಗೇರ.—ಅರ್ಜಿಗಳನ್ನು ಯಾವ ಯಾವ ಜಿಲ್ಲೆಗಳಲ್ಲಿ ಆಹ್ವಾನಿಸಿದ್ದೀರಿ ?

ಶ್ರೀ ಬಿ. ಸೋಮಶೇಖರ್.—ಈಗಾಗಲೇ ಪರಿಶೀಲನೆ ಮಾಡಲಾಗಿದೆ. ಸಂದರ್ಶನಕ್ಕೆ ಕರೆಯುವುದು ಬಾಕಿ ಇದೆ. ಒಂದು ತಿಂಗಳೊಳಗಾಗಿ ಸೂಕ್ತ ಅಭ್ಯರ್ಥಿಗಳನ್ನು ಸಮಿತಿಯವರು ಆಯ್ಕೆ ಮಾಡುತ್ತಾರೆ.

ಶ್ರೀ ಕೆ. ವಸಂತ ಬಂಗೇರ.—ರಾಜ್ಯದಲ್ಲಿ ಪ್ರೌಢಶಾಲೆ ಮತ್ತು ಪ್ರಾಥಮಿಕ ಶಾಲೆಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ.

ಶ್ರೀ ಬಿ. ಸೋಮಶೇಖರ್.—ಅದರ ಬಗ್ಗೆ ತಮಗೆ ಸಂಖ್ಯೆಯನ್ನು ತರಿಸಿಕೊಡುತ್ತೇನೆ.

ಕೆ.ಆರ್.ಇ.ಸಿ. ಪ್ರೌಢಶಾಲೆ ಸುರತ್ಕಲ್

೧೭೬೬. ಶ್ರೀ ಎನ್. ಎಂ. ಅಡ್ಯಂತಾಯ (ಸುರತ್ಕಲ್).—ಮಾನ್ಯ ಪ್ರಾಥಮಿಕ ಹಾಗೂ ಮಾಧ್ಯಮಿಕ ಶಿಕ್ಷಣ ರಾಜ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಸುರತ್ಕಲ್ ಕೆ. ಆರ್. ಇ. ಸಿ. ಆವರಣದ ಪ್ರೌಢ ಶಾಲೆಯಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಶಿಕ್ಷಕರ ಸಂಖ್ಯೆ ಎಷ್ಟು ?

ಆ) ಈ ಶಾಲೆಯಲ್ಲಿರುವ ಶಾಲಾ ಕೊಠಡಿಗಳ ಸಂಖ್ಯೆ ಎಷ್ಟು ?

ಇ) ವಿದ್ಯಾರ್ಥಿಗಳಿಗೆ ಶಾಲಾ ಕೊಠಡಿಗಳಿಲ್ಲದೆ ತೊಂದರೆಯಾಗಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಈ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಂಡ ಕ್ರಮಗಳೇನು ?

ಶ್ರೀ ಬಿ. ಸೋಮಶೇಖರ್ (ಪ್ರಾಥಮಿಕ ಹಾಗೂ ಮಾಧ್ಯಮಿಕ ಶಿಕ್ಷಣ ರಾಜ್ಯ ಮಂತ್ರಿಗಳು).—

ಅ) ವಿದ್ಯಾರ್ಥಿಗಳ ಸಂಖ್ಯೆ ೨೫೩. ಶಿಕ್ಷಕರ ಸಂಖ್ಯೆ ೭ (ಮುಖ್ಯೋಪಾಧ್ಯಾಯರನ್ನು ಸೇರಿ)

ಆ) ೫

ಇ) ಸರ್ಕಾರದ ಗಮನಕ್ಕೆ ಬಂದಿದೆ.

ಈ) ಈ ಶಾಲೆಯು ಖಾಸಗಿ ಆಡಳಿತ ವರ್ಗಕ್ಕೆ ಸೇರಿರುವುದರಿಂದ ಸದರಿ ಶಾಲೆಯು ಆಡಳಿತ ವರ್ಗವೇ ಕೊಠಡಿಗಳನ್ನು ಕಟ್ಟಿಸಬೇಕಾಗಿರುತ್ತದೆ.